ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	259
ಮಾನ್ಯ ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದವರು	ಅಬಕಾರಿ ಸಚಿವರು
ಉತ್ತರಿಸಬೇಕಾದ ದಿನಾಂಕ	17.02.2022

ಕ್ರ..ಸಂ	ಪ್ರಶ್ನೆ	ಉತ್ತರ
ಅ	ಬೀದರ್ ಜಿಲ್ಲೆಯಲ್ಲಿ MSIL ಮದ್ಯದ ಮಳಿಗೆಗಳೆಷ್ಟು; ಮಳಿಗೆಗಳಲ್ಲಿ MRP ದರಕ್ಕಿಂತ ಹೆಚ್ಚಿನ ಬೆಲೆಗೆ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹ ಮಳಿಗೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)	ಬೀದರ ಜಿಲ್ಲೆಯಲ್ಲಿ ಜನವರಿ 2022ರ ಅಂತ್ಯಕ್ಕೆ ಒಟ್ಟು 33 MSIL (ಸಿಎಲ್ 11-ಸಿ) ಮದ್ಯ ಮಾರಾಟ ಮಳಿಗೆಗಳು ಕಾರ್ಯನಿರ್ವಹಿಸುತ್ತಿವೆ. ಎಂ.ಎಸ್.ಐ.ಎಲ್ ಮದ್ಯ ಮಾರಾಟ ಮಳಿಗೆಗಳಲ್ಲಿ MRP ದರಕ್ಕಿಂತ ಹೆಚ್ಚಿನ ಬೆಲೆಗೆ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಬೀದರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ MRP ದರಕ್ಕಿಂತ ಹೆಚ್ಚಿನ ದರಕ್ಕೆ ಮದ್ಯ ಮಾರಾಟ ಮಾಡಿದಂತಹ ಒಟ್ಟು 22 ಮಳಿಗೆಗಳಿದ್ದು, ತಾಲ್ಲೂಕುವಾರು ವಿವರ ಕೆಳಕಂಡಂತಿದೆ;

ಕ್ರ.ಸಂ.	ತಾಲ್ಲೂಕು/ ವಲಯ	2019-20	2020-21	2021-22 (ಜನವರಿ2022ರ ಅಂತ್ಯಕ್ಕೆ)
1	ಬೀದರ್	01	03	10
2	ಬಸವಕಲ್ಯಾಣ	01	03	02
3	ಭಾಲ್ಕಿ	02	02	01
4	ಹುಮನಾಬಾದ್	01	0	03
5	ಔರಾದ್	0	04	06
	ಒಟ್ಟು	05	12	22

ಆ	ಮದ್ಯದ ಮಳಿಗೆಗಳು ಹೆಚ್ಚಿನ ಬೆಲೆಗೆ ಮಾರುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;(ಸಂಪೂರ್ಣವಾದ ಮಾಹಿತಿಯನ್ನು ಒದಗಿಸುವುದು)	ಸಾರ್ವಜನಿಕರಿಗೆ ಎಂ.ಎಸ್.ಐ.ಎಲ್ ಮದ್ಯ ಮಾರಾಟ ಮಳಿಗೆಗಳಲ್ಲಿ ಮದ್ಯವನ್ನು ಹೆಚ್ಚಿನ ಬೆಲೆಗೆ ಮಾರುತ್ತಿರುವುದನ್ನು ತಡೆಗಟ್ಟಲು ಇಲಾಖೆಯ ಕಾರ್ಯವ್ಯಾಪ್ತಿಯ ಎಲ್ಲಾ ವೃಂದದ ಅಧಿಕಾರಿಗಳಿಂದ ನಿಯಮಿತವಾಗಿ ತಪಾಸಣೆಗೊಳಪಡಿಸುತ್ತಿದ್ದು, ಈ ಸಂದರ್ಭದಲ್ಲಿ ಉಲ್ಲಂಘನೆಯು ಕಂಡುಬಂದ್ದಲ್ಲಿ ಸನ್ನದಿನ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ಈ ಪ್ರಕರಣಗಳು ಇಲಾಖೆಯಿಂದ ದಂಡ ವಿಧಿಸಿ ಇತ್ಯರ್ಥಪಡಿಸಬಹುದಾದ ಪ್ರಕರಣಗಳಾಗಿರುವುದರಿಂದ ಸೂಕ್ತ ದಂಡ ವಿಧಿಸುವ ಮುಖಾಂತರ ಕ್ರಮ ಕೈಗೊಳ್ಳಲಾಗುತ್ತಿದೆ. ರೂಢಿಗತವಾಗಿ MRP ನಿಬಂಧನೆಯನ್ನು ಉಲ್ಲಂಘಿಸುವ ಮದ್ಯ ಮಳಿಗೆಗಳ ಸನ್ನದನ್ನು ಅಮಾನತ್ತುಪಡಿಸುವ ಸಂಬಂಧ ಕೂಡ ಕ್ರಮ ಕೈಗೊಳ್ಳಲಾಗಿರುತ್ತದೆ. ಎಂ.ಎಸ್.ಐ.ಎಲ್ ಮದ್ಯ ಮಳಿಗೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ MSIL ಸಂಸ್ಥೆಯಿಂದ ನೇಮಕವಾದ ಜಿಲ್ಲಾ ಸಂಪರ್ಕಾಧಿಕಾರಿಗಳು, ಸಗಟು ಮೇಲ್ವಿಚಾರಕರು ಮತ್ತು ಮಳಿಗೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಸನ್ನದು ಷರತ್ತು ನಿಬಂಧನೆಗಳ ಪಾಲನೆ ಕುರಿತು ಅಗತ್ಯ ಸೂಚನೆಗಳನ್ನು ಕಾಲಕಾಲಕ್ಕೆ ನೀಡಲಾಗಿರುತ್ತದೆ.
ಇ	ಇಂತಹ ಮಳಿಗೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರೂ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ಮೇಲೆ ಸಾರ್ವಜನಿಕರಿಂದ ದೂರುಗಳು ಬಂದಿದ್ದಲ್ಲಿ ಅಂತಹವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ?	ಎಂ.ಎಸ್.ಐ.ಎಲ್ ಮಳಿಗೆಗಳಲ್ಲಿ ಅಬಕಾರಿ ಇಲಾಖೆಯ ಯಾವುದೇ ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವುದಿಲ್ಲ. ಎಂ.ಎಸ್.ಐ.ಎಲ್ ಮಳಿಗೆಗಳಲ್ಲಿ MSIL ಸಂಸ್ಥೆಯಿಂದ ನೇಮಿಸಲ್ಪಟ್ಟ ಅಧಿಕಾರಿ / ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿ ಸಿಬ್ಬಂದಿಗಳ ವಿರುದ್ಧ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ.

ಆಇ 11 ಇಎಲ್‌ಕ್ಯೂ 2022

(ಸಹಿ)
(ಕೆ.ಗೋಪಾಲಯ್ಯ)
ಅಬಕಾರಿ ಸಚಿವರು